**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾ ದಂಡಾಧಿಕಾರಿಗಳವರ ನ್ಯಾಯಾಲಯ, ಶ್ರೀರಂಗಪಟ್ಟಣ**

**ಸಿ.ಸಿ. 1064/2025**

ಫಿರ್ಯಾದಿಃ ಈ.ಮುನಿಸ್ವಾಮಿ ಬಿನ್ ಈಶ್ವರ್
ವಯಸ್ಸು ಸುಮಾರು 58 ವರ್ಷ,
ವಾಸಃ ಹೊಸಬಡಾವಣೆ, ಅರಕೆರೆ ಗ್ರಾಮ,
ಅರಕೆರೆ ಹೋಬಳಿ , ಶ್ರೀರಂಗಪಟ್ಟಣ ತಾಲ್ಲೂಕು,
ಮಂಡ್ಯ ಜಿಲ್ಲೆ.

-ವಿರುದ್ಧ-

ಆರೋಪಿಃ ಶ್ರೀಮತಿ ಸುನಂದಮ್ಮ ಕೋಂ ಲೇಟ್ ನಂಜುಂಡೇಗೌಡ,
(ಹೋಟೇಲ್ ಮಾಲೀಕರು)
ಶ್ರೀ ಬಸವೇಶ್ವರ ದೇವಸ್ಥಾನದ ಹತ್ತಿರ, ಆಲದಹಳ್ಳಿ ಗ್ರಾಮ,
ಅರಕೆರೆ ಹೋಬಳಿ,ಶ್ರೀರಂಗಪಟ್ಟಣ ತಾಲ್ಲೂಕು,
ಮಂಡ್ಯ ಜಿಲ್ಲೆ.

**ಆಪಾದನೆ**

ನಾನು **ಶ್ರೀ ಉಮೇಶ. ಎಮ್.ಪಿ. ಬಿ.ಎ.ಎಲ್., ಎಲ್.ಎಲ್.ಬಿ.,** ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿ, ಶ್ರೀರಂಗಪಟ್ಟಣ ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಈ ಕೆಳಗಿನಂತೆ ಆರೋಪ ಹೊರಿಸುತ್ತಿದ್ದೇನೆ.

ನ್ಯಾಯಾಲಯದ ವ್ಯಾಪ್ತಿಯಲ್ಲಿರುವ ಫಿರ್ಯಾದುದಾರರು ಮತ್ತು ಆರೋಪಿ ಪರಿಚಯಸ್ಥರಾಗಿದ್ದು, ಆರೋಪಿಯಾದ ನೀವು ನಿಮ್ಮ ದರದು ನಿಮಿತ್ತ ಮುಬೈ ಸಾಲಗಳನ್ನು ತೀರಿಸುವ ಮತ್ತು ಹೋಟೇಲ್ ನ ನಡೆಸುವ ಸಲುವಾಗಿ ಮತ್ತು ಕುಟುಂಬದ ಕಾನೂನುಬದ್ಧ ಅವಶ್ಯಕತೆಗಾಗಿ ರೂ.4,00,000/- ರೂ. ಸಾಲ ನೀಡುವಂತೆ ಕೋರಿಕೊಂಡಿದ್ದು ಅದರಂತೆ 06.07.2025 ರಂದು ರೂ.4,00,000/- ಸಾಲವಾಗಿ ಪಡೆದುಕೊಂಡಿದ್ದು, ಅದೇ ದಿನ ಸದರಿ ಹಣದ ಬಾಬ್ತಿಗಾಗಿ ದಿನಾಂಕ 08.09.2025 ರಂದು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ,ಕೊತ್ತತ್ತಿ ಶಾಖೆಯ ದಿನಾಂಕಃ08.09.2025 ರ ಚೆಕ್ಕಿನ ಸಂಖ್ಯೆ: 515425 ನ ರೂ.4,00,000/- ನ ಚೆಕನ್ನು ನೀಡಿದ್ದು, ತದನಂತರ ಫಿರ್ಯಾದುದಾರರು ಸದರಿ ಚೆಕನ್ನು

ನಗದು ಗೊಳಿಸಲು ಕೆನರಾ ಬ್ಯಾಂಕ್, ಅರಕೆರೆ ಶಾಖೆಗೆ ಹಾಕಿದಾಗ ನಿನ್ನ ಖಾತೆಯಲ್ಲಿ ಸಾಕಷ್ಟು ಹಣ ಇರದ ಕಾರಣ ದಿಃ 09.09.2025 ರಂದು "Funds Insufficient" ಎಂಬ ಹಿಂಬರಹದೊಂದಿಗೆ ವಾಪಸ್ ಬಂದಿರುವುದಾಗಿ ಮತ್ತು ಸದರಿ ವಿಷಯವನ್ನು ನಿಮಗೆ ತಿಳಿಸಿ, ಕಾಲಾವಕಾಶ ಕೇಳಿಕೊಂಡಿದ್ದು , ಅಂದರಂತೆ ಪುನಃ ದಿಃ 15.10.2025 ರಂದು ನಗದು ಗೊಳಿಸಲು ಕೆನರಾ ಬ್ಯಾಂಕ್, ಅರಕೆರೆ ಶಾಖೆಗೆ ಹಾಕಿದಾಗ ನಿನ್ನ ಖಾತೆಯಲ್ಲಿ ಸಾಕಷ್ಟು ಹಣ ಇರದ ಕಾರಣ ದಿಃ 15.10.2025 ರಂದು "Funds Insufficient" ಎಂಬ ಹಿಂಬರಹದೊಂದಿಗೆ ವಾಪಸ್ ಬಂದಿದ್ದು, ಆದಕಾರಣ ದಿಃ 23.10.2025 ರಂದು ಅವರ ವಕೀಲರ ಮೂಲಕ ನೋಟಿಸ್ಸು ನೀಡಿ ತಿಳಿಸಿರುವುದಾಗಿ, ಸದರಿ ನೋಟಿಸ್ಸು ನಿಮಗೆ ದಿನಾಂಕಃ 25.10.2025 ರಂದು ಖುದ್ದು ಜಾರಿಯಾಗಿದ್ದರೂ ಸಹ ಸದರಿ ನೋಟೀಸ್ ಗೆ ನೀವು ಯಾವುದೇ ಪ್ರತ್ಯುತ್ತರವನ್ನು ನೀಡಿರುವುದಿಲ್ಲ ಹಾಗೂ ಸದರಿ ಹಣವನ್ನು ನೀವು ಮರುಪಾವತಿ ಮಾಡದೇ **ನೆಗೋಷ್ಯಬಲ್ ಇನ್ಸ್ಟುಮೆಂಟ ಆಕ್ಟ, 138** ರ ಅಡಿಯಲ್ಲಿ ಅಫರಾದ ಎಸುಗಿರುವಿರೆಂದು ನಿಮ್ಮ ಮೇಲೆ ಆರೋಪಣೆ ಇದೆ ಮತ್ತು ಸದ್ರಿ ಆರೋಪಣೆಯನ್ನು ಈ ನ್ಯಾಯಾಲಯದ ಅಧಿಕಾರ ವ್ಯಾಪ್ತಿಯಲ್ಲಿ ಮಾಡಿರುತ್ತೀಯಾ ಎಂದು ಆರೋಪಿಸಲಾಗಿದೆ.

ಈ ಮೇಲ್ಕಂಡ ಆರೋಪಣೆಗೆ ನೀವು ವಿಚಾರಣೆಗೆ ಗುರಿಯಾಗಬೇಕೆಂದು ನಾನು ಈ ಮೂಲಕ ನಿರ್ದೇಶಿಸಿರುತ್ತೇನೆ .

ಪ್ರಶ್ನೆಃ 1. ಈಗ ನಿನಗೆ ಮೇಲೆ ಓದಿ ಹೇಳಿ ವಿವರಿಸಿದ ಆರೋಪಣೆ ತಿಳಿಯಿತೆ ?

**ಉತ್ತರಃ**

ಪ್ರಶ್ನೆಃ 2. ನೀನು ಈ ಮೇಲಿನ ಆರೋಪಣೆಯನ್ನು ಒಪ್ಪಿಕೊಳ್ಳುತ್ತಿಯೋ ಅಥವಾ ನಿನ್ನ ವಿರುದ್ಧ ವಿಚಾರಣೆ ನಡೆಯಬೇಕೆ?

**ಉತ್ತರಃ**

ಪ್ರಶ್ನೆಃ 3 ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ-1 ಚೆಕ್ಕಿನ ನಂ 515425 ನಿಮ್ಮ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಖಾತಾನಂ. 40656352437 ಖಾತೆಗೆ ಸಂಬಂಧಿಸಿದ ಚೆಕ್ ಆಗಿರುತ್ತದೆ ಎಂಬುದನ್ನು ಒಪ್ಪಿಕೊಳ್ಳುವಿರಾ?

**ಉತ್ತರಃ**

ಪ್ರಶ್ನೆಃ 4 ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ–1 ಚೆಕ್ಕಿನ ನಂ 515425 ಮೇಲಿನ ಸಹಿ ನಿಮ್ಮದೇ ಎಂದು ಒಪ್ಪಿಕೊಳ್ಳುವಿರಾ?

**ಉತ್ತರಃ**

ಪ್ರಶ್ನೆಃ 5 ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ–1 ಚೆಕ್ಕಿನ ನಂ 515425 ನ್ನು ಪಿರ್ಯಾದುದಾರರಿಗೆ ನೀಡಿರುವುದಾಗಿ ನೀವು ಒಪ್ಪಿಕೊಳ್ಳುವಿರಾ?

**ಉತ್ತರಃ**

ಪ್ರಶ್ನೆಃ 6 ಪಿರ್ಯಾದುದಾರರಿಂದ 06.07.2025 ರಂದು ರೂ.4,00,000/- ರೂ.ಗಳನ್ನು ಪಡೆದುಕೊಂಡಿರುವಿರಾ?

**ಉತ್ತರಃ**

ಪ್ರಶ್ನೆಃ 7 ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ–1 ಚೆಕ್ಕಿನ ನಂ 515425 ದಿನಾಂಕ 08.09.2025 ರಲ್ಲಿ ನಮೂದಿಸಿದ ರೂ.4,00,000/- ನ್ನು (ನಾಲ್ಕು ಲಕ್ಷ ರೂಪಾಯಿಗಳು ಮಾತ್ರ) ಪಿರ್ಯಾದುದಾರರಿಗೆ ಪಾವತಿ ಮಾಡುವ ಭಾಧ್ಯತೆಯನ್ನು ನೀವು ಒಪ್ಪಿಕೊಳ್ಳುವಿರಾ?

**ಉತ್ತರಃ**

ಪ್ರಶ್ನೆಃ 8 ಈ ಹಂತದಲ್ಲಿ ಈ ಪ್ರಕರಣವನ್ನು ರಾಜೀ ಮಾಡಿಕೊಳ್ಳಲು ಇಚ್ಚಿಸುವಿರಾ?

**ಉತ್ತರಃ**

ಸದ್ರಿ ಮೇಲಿನ ಆರೋಪಣೆಗಳನ್ನು ತೆರೆದ ನ್ಯಾಯಾಲಯದಲ್ಲಿ ದಿಃ **04.08.2026** ರಂದು ಆರೋಪಿಗೆ ಓದಿ ಹೇಳಿ, ಕೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ನಮೂದಿಸಿಕೊಳ್ಳಲಾಯಿತು.

(ಉಮೇಶ.ಎಂ.ಪಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ
ನ್ಯಾಯಾಲಯ,ಶ್ರೀರಂಗಪಟ್ಟಣ.